ಕರ್ನಾಟಕ ಸರ್ಕಾರ

ತಾಂತ್ರಿಕ ಶಿಕ್ಷಣ ಇಲಾಖೆ

**File No:** DTE-ADMI0ACM2/60/2022

ಆಯುಕ್ತರ ಕಛೇರಿ,
ತಾಂತ್ರಿಕ ಶಿಕ್ಷಣ ಭವನ,
ಅರಮನೆ ರಸ್ತೆ, ಬೆಂಗಳೂರು - 560 001.
ದಿನಾಂಕ:28-12-2022.

**-:: ಸು ತ್ತೋ ಲೆ ::-**

ವಿಷಯ: 2022–23ನೇ ಶೈಕ್ಷಣಿಕ ಸಾಲಿನಲ್ಲಿ ಹೊಸದಾಗಿ ಪ್ರಾರಂಭವಾಗಿರುವ 10 ಸರ್ಕಾರಿ ಪಾಲಿಟೆಕ್ನಿಕ್‌ಗಳಲ್ಲಿನ ಪ್ರಥಮ ಸೆಮಿಸ್ಟರ್‌ನ ತರಗತಿಗಳ ಮುಕ್ತಾಯ ದಿನಾಂಕವನ್ನು ವಿಸ್ತರಿಸುವ ಬಗ್ಗೆ.

ಉಲ್ಲೇಖ:-
1. ಈ ಕಛೇರಿ ಸುತ್ತೋಲೆ ಸಂ. DTE-ADMI0ACM2/60/2022, ದಿ:29-08-2022.
2. ಪ್ರಾಂಶುಪಾಲರು, ಸಕಾರಿ ಪಾಲಿಟೆಕ್ನಿಕ್ ಕಡೂರು ಇವರ ಪತ್ರ ಸಂ. ಸಪಾಕ/ಪ್ರವೇಶ/04/2022-23/54, ದಿ:27-12-2022.

********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 2022-23ನೇ ಸಾಲಿನಲ್ಲಿ ಹೊಸದಾಗಿ ಪ್ರಾರಂಭವಾಗಿರುವ ಸರ್ಕಾರಿ ಪಾಲಿಟೆಕ್ನಿಕ್, ಕಡೂರು ಸಂಸ್ಥೆಯಲ್ಲಿ ಪ್ರವೇಶಾತಿ ಪಡೆದಿರುವ ವಿದ್ಯಾರ್ಥಿಗಳಿಗೆ ಕಾರಣಾಂತರಗಳಿಂದ ಶೈಕ್ಷಣಿಕ ಚಟುವಟಿಕೆ, ಪಾಠ ಪ್ರವಚನಗಳನ್ನು ಸಮರ್ಪಕವಾಗಿ ಮುಗಿಸಲು ಸಾಧ್ಯವಾಗಿರುವುದಿಲ್ಲವೆಂದು ಉಲ್ಲೇಖ(1)ರಶೈಕ್ಷಣಿಕ ವೇಳಾಪಟ್ಟಿಯಲ್ಲಿ 01ನೇ ಸೆಮಿಸ್ಟರ್‌ನ ಮುಕ್ತಾಯ ದಿನಾಂಕವನ್ನು 14-01-2023ರ ವರೆಗೆ ವಿಸ್ತರಿಸಲು ಉಲ್ಲೇಖ(2)ರ ಪತ್ರದಲ್ಲಿ ಕೋರಿರುತ್ತಾರೆ. ಒಟ್ಟಾರೆ **ಹೊಸದಾಗಿ ಪ್ರಾರಂಭವಾಗಿರುವ 10 ಸರ್ಕಾರಿ ಪಾಲಿಟೆಕ್ನಿಕ್‌ಗಳಿಗೆ ಮಾತ್ರ ಅನ್ವಯವಾಗುವಂತೆ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಪ್ರಥಮ ಸೆಮಿಸ್ಟರ್ ಡಿಪ್ಲೋಮಾ ತರಗತಿಯ ಅವಧಿಯನ್ನು ದಿನಾಂಕ:14-01-2023ರ ವರೆಗೆ ವಿಸ್ತರಿಸಿ** ಅನುಮತಿ ನೀಡಲಾಗಿದೆ.

ಹೊಸದಾಗಿ ಪ್ರಾರಂಭವಾಗಿರುವ 10 ಸರ್ಕಾರಿ ಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರುಗಳು ಗಮನದಲ್ಲಿರಿಸಿಕೊಂಡು ಕೋವಿಡ್-19 ಸಾಂಕ್ರಾಮಿಕ ರೋಗದ ಹಿನ್ನಲೆಯಲ್ಲಿ ಮುನ್ನೆಚರಿಕೆ ಕ್ರಮಗಳನ್ನು ಅನುಸರಿಸಿ, 2022–23ನೇ ಶೈಕ್ಷಣಿಕ ಸಾಲಿನಲ್ಲಿ ಪ್ರಥಮ ಸೆಮಿಸ್ಟರ್ ತರಗತಿಗೆ ಪ್ರವೇಶ ಪಡೆದಿರುವ ವಿದ್ಯಾರ್ಥಿಗಳಿಗೆ ಮೇಲ್ಕಂಡಂತೆ ವಿಸ್ತರಿಸಲಾದ ಅವಧಿಯಲ್ಲಿ ನಿಯಮಗಳ ಪ್ರಕಾರ ಶೈಕ್ಷಣಿಕ ಚಟುವಟಿಕೆ, ಪಾಠ ಪ್ರವಚನಗಳನ್ನು ಮುಕ್ತಾಯಗೊಳಿಸುವಲ್ಲಿ ಕ್ರಮ ತೆಗೆದುಕೊಳ್ಳಬೇಕೆಂದು ತಿಳಿಸಲಾಗಿದೆ. ಮೇಲ್ಕಂಡ ಅವಧಿಯನ್ನು ಹೊರತುಪಡಿಸಿ ಉಲ್ಲೇಖ(1)ರ ವೇಳಾಪಟ್ಟಿಯಲ್ಲಿ ಯಾವುದೇ ಬದಲಾವಣೆ ಇರುವುದಿಲ್ಲ.

ಕರಡು ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ.

ಜಂಟಿ ನಿರ್ದೇಶಕರು(ಆಡಳಿತ)
ತಾಂತ್ರಿಕ ಶಿಕ್ಷಣ ಇಲಾಖೆ
ಬೆಂಗಳೂರು

ಇವರಿಗೆ,

ಸರ್ಕಾರಿ ಪಾಲಿಟೆಕ್ನಿಕ್ ಕಡೂರು, ಕೊಳ್ಳೇಗಾಲ, ಮಳವಳ್ಳಿ, ಹಾರೋಹಳ್ಳಿ, ಸದಲಗ, ಹಳಿಯಾಳ, ಗುನ್ನಾಳ, ಹೂವಿನ ಹಡಗಲಿ, ಚಿತ್ರಳ್ಳಿ, ಬಸವಾಪಟ್ಟಣ ಸಂಸ್ಥೆಗಳ ಪ್ರಾಂಶುಪಾಲರುಗಳಿಗೆ – ಸೂಕ್ತ ಕ್ರಮಕ್ಕಾಗಿ ಹಾಗೂ ಅನುಸರಣೆಗಾಗಿ.

ಪ್ರತಿ:-

1. ಮಾನ್ಯ ಆಯುಕ್ತರ ಆಪ್ತಶಾಖೆಗೆ.
2. ಮಾನ್ಯ ನಿರ್ದೇಶಕರ ಆಪ್ತಶಾಖೆಗೆ.
3. ಜಂಟಿ ನಿರ್ದೇಶಕರು(ಆಡಳಿತ), ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
4. ಜಂಟಿ ನಿರ್ದೇಶಕರು(ಪರೀಕ್ಷೆ), ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
5. ಆಡಳಿತಾಧಿಕಾರಿಗಳು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು
6. ಸಾರ್ವಜನಿಕ ಸಂಪರ್ಕಾಧಿಕಾರಿಗಳು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
7. ಇ-ಆಡಳಿತ ವಿಭಾಗಕ್ಕೆ – ಸದರಿ ಸುತ್ತೋಲೆಯನ್ನು ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸುವುದು.
8. ರಿಜಿಸ್ಟ್ರಾರ್(ಪರೀಕ್ಷೆ), ಕಾಲೇಜು & ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
9. ಕಛೇರಿ ಪ್ರತಿ.